LGCL UNITED TOWERS

ಜಂಟಿ ನಿರ್ದೇಶಕರು (ನಗರ ಯೋಜನೆ-ಉತ್ತರ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
ನಂ. CC/28/17-18
ದಿನಾಂಕ: 21/9/17

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD NORTH/0327/2014-15 ದಿನಾಂಕ: 20-09-2017 21/9/17

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ. 234/134/134, ಸರ್ವೆ ನಂ. 20/4, ಕಾಡುಬೀಸನಹಳ್ಳಿ ಗ್ರಾಮ, ವರ್ತೂರು ಹೋಬಳಿ, ಮಾರತ್‌ಹಳ್ಳಿ ಉಪ-ವಲಯ, ವಾರ್ಡ್ ನಂ. 150, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಪರಿಷ್ಕೃತ ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNORTH/LP/0327/2014-15 ದಿನಾಂಕ: 11-05-2017.
2) ತಮ್ಮ ಮನವಿ ಪತ್ರ ದಿನಾಂಕ: 05-08-2017.

* * * * * * *

ಆಸ್ತಿ ಸಂಖ್ಯೆ. 234/134/134, ಸರ್ವೆ ನಂ. 20/4, ಕಾಡುಬೀಸನಹಳ್ಳಿ ಗ್ರಾಮ, ವರ್ತೂರು ಹೋಬಳಿ, ಮಾರತ್‌ಹಳ್ಳಿ ಉಪ-ವಲಯ, ವಾರ್ಡ್ ನಂ. 150, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ತಳ + ನೆಲ + ಮೇಲಿನ 7 ಅಂತಸ್ತುಗಳ 50 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 11-05-2017 ರಂದು ಪರಿಷ್ಕೃತ ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 31-08-2017 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಸಂಬಂಧ ಶುಲ್ಕ ಮತ್ತು ಕೆರೆ ಪುನರುಜ್ಜೀವನ ಶುಲ್ಕ ಸೇರಿ ಒಟ್ಟು ರೂ. 1,14,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ, ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000355, ದಿನಾಂಕ: 07-09-2017 ರಂದು ಸಂದಾಯ ಮಾಡಿರುವುದರಿಂದ, ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ವಿವಿಧ ಇಲಾಖೆಗಳಿಂದ ನೀಡಲಾಗಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಷರತ್ತಿಗಳಿಗೆ ಬದ್ಧರಾಗಿರತಕ್ಕದ್ದು.
6. ಸದರಿ ಸ್ವತ್ತಿನಲ್ಲಿ ತಳ + ನೆಲ + ಮೇಲಿನ 4 ಅಂತಸ್ತಿನವರೆಗೆ ಕಟ್ಟಡ ನಿರ್ಮಿಸತಕ್ಕದ್ದು, 5ನೇ ಅಂತಸ್ತಿನಿಂದ ಕಟ್ಟಡ ನಿರ್ಮಾಣ ಮಾಡುವ ಮೊದಲು ಹೆಚ್.ಎ.ಎಲ್. ಇಲಾಖೆಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು.

20/9/17

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,
ಮೆ॥ ಎಲ್.ಜಿ.ಸಿ.ಎಲ್ ಹೋಮ್ಸ್ (ಇಂ) ಎಲ್‌ಎಲ್‌ಪಿ,
ನಂ. 12/1, ರೆಸ್ಟ್‌ಹೌಸ್ ರಸ್ತೆ,
ಬೆಂಗಳೂರು– 560 001.

20/9/17 20/9/17 20/9/17